**CC 900/2022**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್** 900/2022

**ಸಿ ಡಬ್ಲ್ಯೂ** -11
**ಪಿ ಡಬ್ಲ್ಯೂ** - 12

| | |
|---|---|
| **ಸಾಕ್ಷಿಯ ಹೆಸರು -** | **ಆಸೀಫ್** |
| **ತಂದೆಯ ಹೆಸರು -** | **ಇಮಾಮ್ ಸಾಬ** |
| **ವಯಸ್ಸು -** | 34 **ವರ್ಷಗಳು** |
| **ಉದ್ಯೋಗ -** | **ಬೇಲದಾರ ಕೆಲಸ** |
| **ವಾಸಸ್ಥಳ -** | **ಕಣೆಕಲ್** |

**ಸಾಕ್ಷಿಯನ್ನು ದಿನಾಂಕಃ** 22-08-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಪ್ರಕರಣದಲ್ಲಿನ ಆರೋಪಿತರ ಪರಿಚಯ ಇರುತ್ತದೆ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೋಲಿಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ಆರೋಪಿತರು ಚಾಸಾ -1 ರವರಿಗೆ ಕಿರುಕುಳ ನೀಡಿರುತ್ತಾರೆ, ಅವರೊಂದಿಗೆ ಜಗಳವಾಡಿ ಹೊಡೆ ಬಡೆ ಮಾಡಿರುತ್ತಾರೆ ಮತ್ತು ಅವ್ಯಾಚ್ಯ ಶಬ್ದಗಳಿಂದ ಬೈದು ಬೆದರಿಕೆ ಹಾಕಿರುತ್ತಾರೆ ಅಂದರೆ ಸರಿಯಲ್ಲ.

ನಾನು ಈ ಬಗ್ಗೆ ಪೋಲಿಸರಿಗೆ ದಿನಾಂಕಃ 01-12-2021 ರಂದು " ನಂತರದ ದಿನಗಳಲ್ಲಿ ..................................... ತನ್ನ ಗಂಡ ಹಾಗೂ ಅವರ ಮನೆಯವರ ಮೇಲೆ ದೂರು ನೀಡಿದ ವಿಚಾರ ಗೊತ್ತಾಯಿತು" ಎಂದು ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಸಾಕ್ಷಿ ನೀಡಿಲ್ಲ ಎಂಬ ಹೇಳಿಕೆಯ ಭಾಗವನ್ನು **ನಿಪಿಃ** 10 ಎಂದು ಗುರುತಿಸಲಾಯಿತು.

ಆರೋಪಿತರು ನಮ್ಮ ಊರಿನವರು ಅಂದರೆ ಸರಿ. ಆರೋಪಿತರು ನಮ್ಮ ಊರಿನವರಾಗಿರುವುದರಿಂದ ಅವರ ಮಾತು ಕೇಳಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಕೆ ವಾಯ್., ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.